ಇ) ಬಂದಿದೆ.

ಈ) ಕೆರೆ ತುಂಬಿಸುವ ಯೋಜನೆಗಳನ್ನು ರೂಪಿಸಲಾಗುತ್ತಿದೆ.

ಉ) ಭದ್ರಾ ಮೇಲ್ದಂಡೆ ಯೋಜನೆಯಡಿ ಕೋಲಾರ ತಾಲ್ಲೂಕಿನ 19 ಸಣ್ಣ ನೀರಾವರಿ ಕೆರೆಗಳಿಗೆ ನೀರನ್ನು ತುಂಬಿಸುವ ಯೋಜನೆಯಿದ್ದು, ಇದರ ಸರ್ವೆ ಕಾರ್ಯವನ್ನು ಪೂರ್ಣಗೊಳಿಸಿ, ರೂ. 10.09 ಕೋಟಿಗೆ ಅಂದಾಜು ತಯಾರಿಸಲಾಗಿದೆ. ಸರ್ವೆ ಕಾರ್ಯಗಳಿಗಾಗಿ ರೂ. 42.00 ಲಕ್ಷ ಅನುದಾನ ಒದಗಿಸಿದ್ದು, ಈವರೆಗೆ ರೂ. 19.66 ಲಕ್ಷ ಹಣ ಬಿಡುಗಡೆಯಾಗಿದೆ.

ನೇತ್ರಾವತಿ ತಿರುವು ಯೋಜನೆಯಿಂದ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಪ್ರದೇಶಗಳಿಗೆ ಕುಡಿಯುವ ನೀರು ಮತ್ತು ಅಂತರ್ಜಲ ಅಭಿವೃದ್ಧಿಗೆ ನೀರು ಬಳಸುವ ಪ್ರಸ್ತಾಪವಿರುತ್ತದೆ. ಇದರ ತನಿಖಾನ್ವೇಷಣೆ ಹಾಗೂ ವರದಿಯ ತಯಾರಿಕೆಯ ವೆಚ್ಚ ರೂ. 14.25 ಕೋಟಿಗಳಾಗಿರುತ್ತದೆ. ಈವರೆಗೆ ರೂ.643.79 ಲಕ್ಷಗಳನ್ನು ಮೆ: ಎನ್.ಆರ್.ಎಸ್.ಸಿ. ಸಂಸ್ಥೆಗೆ ಪಾವತಿ ಮಾಡಲಾಗಿದೆ.

75ಎ–ಬಿ ಪ್ರಕರಣಗಳು

36(151) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಮನಗರ ಜಿಲ್ಲೆಯಲ್ಲಿ ಮತ್ತು ಮಾಗಡಿ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಿಂದ 79 ಎ–ಬಿ ಪ್ರಕರಣಗಳು ಎಷ್ಟು ದಾಖಲಾಗಿದೆ; ಅವುಗಳು ಯಾವುವು; (ವಿವರ ನೀಡುವುದು);

ಆ) ಹಾಗಿದ್ದಲ್ಲಿ ದಾಖಲಾಗಿರುವ ಪ್ರಕರಣಗಳು ಯಾವ ಹಂತದಲ್ಲಿವೆ: ಎಷ್ಟು ಪ್ರಕರಣಗಳು ಇತ್ಯರ್ಥವಾಗಿವೆ; ಬಾಕಿ ಉಳಿದಿರುವ ಪ್ರಕರಣಗಳೆಷ್ಟು; (ಪೂರ್ಣ ಮಾಹಿತಿಗಳನ್ನು ಒದಗಿಸುವುದು)

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು)

ಅ) ರಾಮನಗರ ಜಿಲ್ಲೆಯಲ್ಲಿ ಒಟ್ಟು 973 ಪ್ರಕರಣಗಳು ದಾಖಲಾಗಿವೆ. (ತಾಲ್ಲೂಕುವಾರು ಪಟ್ಟಿ ಲಗತ್ತಿಸಿದೆ)

ಮಾಗಡಿ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಿಂದ ಒಟ್ಟು 161 ಪ್ರಕರಣಗಳು ದಾಖಲಾಗಿರುತ್ತವೆ. (ಪಟ್ಟಿ ಲಗತ್ತಿಸಿದೆ).

ಆ) 1) ದಾಖಲಾಗಿರುವ ಪ್ರಕರಣಗಳಲ್ಲಿ 508 ಪ್ರಕರಣಗಳು ಇತ್ಯರ್ಥವಾಗಿವೆ. 465 ಪ್ರಕರಣಗಳು ಇತ್ಯರ್ಥಕ್ಕೆ ಬಾಕಿ ಇದ್ದು ವಿಚಾರಣೆ ಹಂತದಲ್ಲಿರುತ್ತವೆ. ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ (ತಾಲ್ಲೂಕುವಾರು ಪಟ್ಟಿ ಲಗತ್ತಿಸಿದೆ).

ಕ್ರ. ಸಂ.	ತಾಲ್ಲೂಕಿನ ಹೆಸರು	ಇತ್ಯರ್ಥವಾಗಿರುವ ಪ್ರಕರಣಗಳು	ಬಾಕಿ ಇರುವ ಪ್ರಕರಣಗಳು
1	2	3	4
1	ರಾಮನಗರ	215	172
2	ಚನ್ನಪಟ್ಟಣ	68	77
3	ಮಾಗಡಿ	131	30
4	ಕನಕಪುರ	94	186
	ಒಟ್ಟು	**508**	**465**

ಸ್ಮಶಾನಗಳ ಒತ್ತುವರಿ

37(338) ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸ್ಮಶಾನಗಳು ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಒತ್ತುವರಿಯಾಗಿರುವ ಸ್ಮಶಾನಗಳ ಜಾಗವನ್ನು ತೆರವು ಗೊಳಿಸಲು ಸರ್ಕಾರ ಕ್ರಮಕೈಗೊಳ್ಳುವುದೇ;

ಇ) ಹಾಗಿದ್ದಲ್ಲಿ, ಒಟ್ಟು ಒತ್ತುವರಿ ಮಾಡಿಕೊಂಡಿರುವ ಜಮೀನಿನ ವಿಸ್ತೀರ್ಣ ಎಷ್ಟು; (ವಿವರಗಳನ್ನು ನೀಡುವುದು)

ಈ) ಸ್ಮಶಾನದ ಜಾಗ ಒತ್ತುವರಿಯಾಗಿದ್ದಲ್ಲಿ, ಒತ್ತುವರಿಯಾಗಿರುವ ಜಮೀನಿನ ಸ್ವಾಧೀನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಉ) ಒತ್ತುವರಿ ತೆರವುಗೊಳಿಸಿರುವ ಸ್ಮಶಾನಗಳಿಗೆ ಕಾಂಪೌಂಡ್ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಊ) ಹಾಗಿದ್ದಲ್ಲಿ, ಕಾಂಪೌಂಡ್ ನಿರ್ಮಿಸಲು ವಿನಿಯೋಗಿಸುತ್ತಿರುವ ಮೊತ್ತ ಎಷ್ಟು; (ವಿವರಗಳನ್ನು ನೀಡುವುದು)?